# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 141 (128)

2) ಸದಸ್ಯರ ಹೆಸರು : ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)

3) ಉತ್ತರಿಸುವ ದಿನಾಂಕ : 01.02.2021

4) ಉತ್ತರಿಸುವವರು : ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ಕಾಡಾನೆ ದಾಳಿ ಪ್ರಕರಣಗಳು ನಿರಂತವಾಗಿ ವರದಿಯಾಗುತ್ತಿದ್ದು, ನಗರ ಹಾಗೂ ಪಟ್ಟಣ ಪ್ರದೇಶಗಳಿಗೂ ಕಾಡಾನೆಗಳು ದಾಂಗುಡಿ ಇಟ್ಟು ದಾಳಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಕಾಡಾನೆ ದಾಳಿ ತಪ್ಪಿಸಲು ಜಿಲ್ಲೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕೊಡಗು ಜಿಲ್ಲೆಯಲ್ಲಿ ಮಾನವ-ಆನೆ ಸಂಘರ್ಷ ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ವಹಿಸಲಾಗುತ್ತಿದೆ.<br>• ಆನೆ ತಡೆಕಂದಕ ನಿರ್ವಹಣೆ<br>• ಸೋಲಾರ್ ತಂತಿ ಬೇಲಿ ನಿರ್ಮಾಣ / ನಿರ್ವಹಣೆ<br>• ತೂಗು ಸೋಲಾರ್ ತಂತಿ ಬೇಲಿ ನಿರ್ಮಾಣ /ನಿರ್ವಹಣೆ<br>• ಉಪಯೋಗಿತ ರೈಲು ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಾಣ<br>• ವನ್ಯಪ್ರಾಣಿಗಳಿಗೆ ಕುಡಿಯುವ ನೀರಿಗಾಗಿ ಕೆರೆ/ ಚೆಕ್‌ಡ್ಯಾಂಗಳ ನಿರ್ಮಾಣ ಮತ್ತು ಹಾಲಿ ಇರುವ ಕೆರೆಗಳ ಹೂಳೆತ್ತುವ ಕಾಮಗಾರಿಗಳನ್ನು ನಿರ್ವಹಿಸಲಾಗುತ್ತಿದೆ.<br>• ಕೊಡಗು ಜಿಲ್ಲೆಯ ಅರಣ್ಯ ವೃತ್ತದ ವ್ಯಾಪ್ತಿಯ ವಲಯಗಳಲ್ಲಿ ಕಾಡಾನೆ ಹಾವಳಿಯನ್ನು ತುರ್ತು ನಿರ್ವಹಣೆ ಕ್ಷಿಪ್ರ ಸ್ಪಂದನ ತಂಡಗಳನ್ನು ರಚಿಸಿ ಕಾರ್ಯನಿರ್ವಹಿಸಲಾಗುತ್ತಿದೆ.<br>• ಆಯ್ದ ವಲಯಗಳಲ್ಲಿ ಕಾಡಾನೆಗಳನ್ನು ಮರಳಿ ಕಾಡಿಗೆ ಓಡಿಸುವ ತಂಡ ರಚನೆ ಮಾಡಲಾಗಿದೆ.<br>• ಕಾಡಾನೆ ಇರುವಿಕೆ ಅವುಗಳ ಚಲನವಲನಗಳ ಬಗ್ಗೆ ಸಾರ್ವಜನಿಕರಿಗೆ ರೈತರಿಗೆ ಮಾಹಿತಿ ನೀಡುವ SMS Alert System ಕಾರ್ಯ ನಿರ್ವಹಿಸುತ್ತಿದೆ.<br>• ವನ್ಯಪ್ರಾಣಿಗಳ ದಾಳಿಯಿಂದ ಭಾದಿತ ಗ್ರಾಮಗಳ ಜನರೊಂದಿಗೆ ಸಂಪರ್ಕ ಸಭೆಯನ್ನು ನಡೆಸಲಾಗುತ್ತಿದೆ. |
| ಇ) | ಕಳೆದ ಮೂರು ವರ್ಷಗಳಲ್ಲಿ ಕಾಡಾನೆ ದಾಳಿ ತಪ್ಪಿಸುವ ಸಲುವಾಗಿ ವಿನಿಯೋಗಿಸಿರುವ ಅನುದಾನವೆಷ್ಟು? (ಕೈಗೊಂಡಿರುವ ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು) | |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| | | • ಕೊಡಗು ಜಿಲ್ಲೆಯಲ್ಲಿ 2014ರಿಂದ ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ 11 ಕಾಡಾನೆಗಳನ್ನು ಸೆರೆಹಿಡಿದು ಸ್ಥಳಾಂತರ ಮಾಡಲಾಗಿದೆ.<br>• ವಿರಾಜಪೇಟೆ ವಿಭಾಗದಲ್ಲಿ 9 ಆನೆಗಳಿಗೆ ರೇಡಿಯೋ ಕಾಲರ್‌ಗಳನ್ನು ಅಳವಡಿಸಿ ಅವುಗಳ ಚಲನ ವಲನಗಳ ಬಗ್ಗೆ ನಿಗಾವಹಿಸಲಾಗುತ್ತಿದೆ.<br>• ಕೊಡಗು ಜಿಲ್ಲೆಯ ನಾಗರಹೊಳೆ ವ್ಯಾಪ್ತಿಯಲ್ಲಿ ರಕ್ಷಣಾ ಕೆಲಸಗಳಿಗಾಗಿ ಎಸ್.ಟಿ.ಪಿ.ಎಫ್ ತಂಡ ನೇಮಕ ಮಾಡಿ ರಕ್ಷಣಾ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ.<br>• ವನ್ಯಪ್ರಾಣಿಗಳ ರಕ್ಷಣಾ ದೃಷ್ಟಿಯಿಂದ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ 37 ವನ್ಯಪ್ರಾಣಿ ಹತ್ಯೆತಡೆ ಶಿಬಿರಗಳನ್ನು ಸ್ಥಾಪನೆ ಮಾಡಿ ಪ್ರತಿ ದಿನ ಗಸ್ತು ಮಾಡಿ ಕಳ್ಳಬೇಟೆ ನಿಯಂತ್ರಣದೊಂದಿಗೆ ಆನೆಗಳು ರೈತರ ಜಮೀನಿಗೆ ನುಸುಳದಂತೆ ಕ್ರಮವಹಿಸಲು ಮತ್ತು ಕಾಡಿನಿಂದ ಹೊರಗೆ ಬಂದಿರುವ ಆನೆಗಳನ್ನು ಕಾಡಿಗೆ ಹಿಮ್ಮೆಟಿಸಲು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>• ಈ ರಕ್ಷಣಾ ಕಾರ್ಯದ ಸಿಬ್ಬಂದಿಗಳಿಗೆ ಹಾಗೂ ಇಲಾಖಾ ಸಿಬ್ಬಂದಿಗಳಿಗೆ ವೈರ್‌ಲೆಸ್ ವಾಕಿ ಟಾಕಿ, ಶಸ್ತ್ರಾಸ್ತ್ರ ಆಹಾರ ಸಾಮಗ್ರಿಗಳನ್ನು ಒದಗಿಸಿ ಪರಿಣಾಮಕಾರಿಯಾಗಿ ರಕ್ಷಣಾಕಾರ್ಯ ಕೈಗೊಳ್ಳಲಾಗುತ್ತಿದೆ.<br>• ಮಾನವ-ಪ್ರಾಣಿ ಸಂಘರ್ಷವನ್ನು ತಡೆಯಲು ತಕ್ಷಣದ ಕ್ರಮಗಳನ್ನು ತೆಗೆದುಕೊಳ್ಳಲು **"ಕೊಡಗು ಮಾನವ-ವನ್ಯಪ್ರಾಣಿ ಸಂಘರ್ಷ ಉಪಶಮನ ಪ್ರತಿಷ್ಠಾನ"** ವನ್ನು ವೃತ್ತ ಮಟ್ಟದಲ್ಲಿ ಸ್ಥಾಪಿಸಲಾಗಿದೆ.<br><br>ಕಳೆದ ಮೂರು ವರ್ಷಗಳಲ್ಲಿ ಮಾನವ-ಆನೆ ಸಂಘರ್ಷ ತಡೆಗಟ್ಟಲು ವಿನಿಯೋಗಿಸಿರುವ ಅನುದಾನದ ವಿವರಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ. |

ಸಂಖ್ಯೆ: ಅಪಜೀ 15 ಎಫ್‌ಡಬ್ಲ್ಯೂಎಲ್ 2021

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು

## ಅನುಬಂಧ-1

### ಕಳೆದ 3 ವರ್ಷಗಳಲ್ಲಿ ವನ್ಯಜೀವಿ ಮಾನವ ಸಂಘರ್ಷ ತಪ್ಪಿಸಲು ಕೊಡಗು ಜಿಲ್ಲೆಯಲ್ಲಿ ಕೈಗೊಂಡಿರುವ ಕ್ರಮಗಳು

( ರೂ. ಲಕ್ಷಗಳಲ್ಲಿ )

| ಕ್ರ. ಸಂ. | ಕಾಮಗಾರಿಗಳ ವಿವರ | 2017-18 | | 2018-19 | | 2019-20 | | 2020-21 | |
|---|---|---|---|---|---|---|---|---|---|
| | | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ | ಭೌತಿಕ | ಆರ್ಥಿಕ |
| 1 | ಆನೆ ನಿರೋಧಕ ಕಂದಕ ನಿರ್ಮಾಣ (ಕಿ.ಮೀ) | 51.726 | 304.149 | 1.35 | 9.000 | 10.31 | 66.27 | 28.5 | 43.553 |
| 2 | ಹಾಲಿ ಇರುವ ಆನೆ ನಿರೋಧಕ ಕಂದಕ ನಿರ್ವಹಣೆ (ಕಿ.ಮೀ) | 37.722 | 97.694 | 56.46 | 21.918 | 43.16 | 19.33 | 3.35 | 1.438 |
| 3 | ಸೋಲಾರ್ ಬೇಲಿ ನಿರ್ಮಾಣ (ಕಿ.ಮೀ) | 28.650 | 77.255 | 3.00 | 7.998 | 2.50 | 5.00 | 0.2 | 0.600 |
| 4 | ಹಾಲಿ ಇರುವ ಸೋಲಾರ್ ಬೇಲಿ ನಿರ್ವಹಣೆ (ಕಿ.ಮೀ) | 40.000 | 16.000 | 75.00 | 43.058 | 20.00 | 6.20 | 26.6 | 10.470 |
| 5 | ಕೆರೆ ನಿರ್ಮಾಣ (ಸಂಖ್ಯೆ) | 23 | 68.946 | 9 | 15.650 | 12 | 24.30 | 3 | 5.250 |
| 6 | ಕೆರೆ ಹೂಳೆತ್ತುವಿಕೆ (ಸಂಖ್ಯೆ) | 30 | 49.412 | 14 | 12.500 | 16 | 21.55 | 6 | 7.800 |
| 7 | ಆಂಟಿ ಡಿಪ್ರಡೇಷನ್ ಕ್ಯಾಂಪ್ ನಿರ್ವಹಣೆ (ಸಂಖ್ಯೆ) | 20 | 91.063 | 18 | 75.801 | 22 | 164.72 | 11 | 61.2655 |
| 8 | ಆರ್.ಆರ್.ಟಿ ತಂಡದ ರಚನೆ (ಸಂಖ್ಯೆ) | 15 | 76.887 | 0 | - | 1 | 5.35 | 36 | 278.692 |
| 9 | 50:50 ಅನುಪಾತದಲ್ಲಿ ಸೋಲಾರ್ ತಂತಿ ಬೇಲಿ ನಿರ್ಮಾಣ (ಕಿ.ಮೀ) | 3.00 | 3.960 | 3.00 | 3.450 | 2.174 | 1.73 | 0.87 | 1.000 |
| 10 | ತೂಗು ಸೋಲಾರ್ ತಂತಿ ಬೇಲಿ ನಿರ್ಮಾಣ (ಕಿ.ಮೀ) | – | – | - | - | 33.37 | 68.69 | - | - |
| 11 | ಇಪಿಟಿ ನಡುವೆ ಮೆದುಕಲ್ಲು ತೆರವುಗೊಳಿಸುವುದು (ಘ.ಮೀ) | 147.375 | 1.195 | - | - | - | - | - | - |
| 12 | ಕಾಡಾನೆ ಹಾವಳಿ ಹೆಚ್ಚಾಗಿರುವ ಗ್ರಾಮಗಳಲ್ಲಿ ಶಾಲಾ ವಾಹನಗಳ ನಿಯೋಜನೆ | – | 5.150 | - | 8.400 | - | - | - | - |
| 13 | ರೈಲ್ವೆ ಬ್ಯಾರಿಕೇಡ್ ನಿರ್ಮಾಣಕಾರ್ಯಕ್ಕೆ ರೈಲ್ವೆ ಹಳಿಗಳ ಖರೀದಿ (ಮೆ.ಟನ್) | 496.174 | 175.000 | - | - | - | - | - | - |
| 14 | ರೈಲ್ವೆ ಬ್ಯಾರಿಕೇಡ್ ನಿರ್ಮಾಣ ( ಕಿ. ಮೀ. ) | – | – | - | - | 24.625 | 22.80 | - | - |
| | ಒಟ್ಟು | | 966.711 | | 198.775 | | 405.931 | | 410.068 |